ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಸಿ3[1]ಪ್ರಾ.ಶಿ: ವ್ಯ. ಬ. /2017-18/2019-20 ದಿನಾಂಕ 04.09.2019

**ಜ್ಞಾಪನಾ**

ವಿಷಯ:- ವಿಶೇಷ ಚೇತನ ಮಕ್ಕಳ ಶಿಕ್ಷಣದ ಮಧ್ಯವರ್ತನಗಳನ್ನು ಅನುಷ್ಠಾನಗೊಳಿಸಲು ಬ್ಲಾಕ್ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರ ಹುದ್ದೆಗಳನ್ನು ಸ್ಥಳಾಂತರಿಸುವ ಬಗ್ಗೆ.

ಉಲ್ಲೇಖ:- 1. ಸರ್ಕಾರದ ಆದೇಶ ಸಂಖ್ಯೆ ಇಡಿ 94 ಎಲ್.ಬಿ.ಪಿ 2017 (ಭಾಗ-1) ದಿನಾಂಕ 20.08.2019

2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರ ಪತ್ರ ಸಂಖ್ಯೆ ಸ.ಶಿ.ಅ/ಸ.ಶಿ.ಅ/ಬಿ.ಐ.ಇ.ಆರ್.ಟಿ/ಹು.ಮಂ-01/2019-20 ದಿನಾಂಕ 22.08.2019.

* * * *

ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು, ಇವರ ವತಿಯಿಂದ 2019-20ನೇ ಸಾಲಿನಿಂದ ಸಮನ್ವಯ ಶಿಕ್ಷಣ ಮಧ್ಯವರ್ತನೆಯನ್ನು (ವಿಶೇಷ ಅಗತ್ಯತೆಯುಳ್ಳ ಮಕ್ಕಳ ಶಿಕ್ಷಣಕ್ಕಾಗಿ) ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ, ಈಗಾಗಲೇ ಇಲಾಖೆಗೆ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳಲ್ಲಿ, ಪ್ರತಿ ಬ್ಲಾಕ್‌ಗೆ ಸರ್ಕಾರಿ ಪ್ರಾಥಮಿಕ ಶಾಲಾ ವೃಂದದ ಎರಡು ಹುದ್ದೆಗಳನ್ನು ಹಾಗೂ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದ ಎರಡು ಹುದ್ದೆಗಳನ್ನು ರಾಜ್ಯದ 204 ಬ್ಲಾಕ್‌ಗಳಿಗೆ ಒಟ್ಟು 816 ಹುದ್ದೆಗಳನ್ನು ಸ್ಥಳಾಂತರಿಸುವ ಮೂಲಕ ಸೃಜಿಸಲು ಉಲ್ಲೇಖ(1)ರ ಸರ್ಕಾರದ ಆದೇಶಾನುಸಾರ ವಿಧಿಸಿರುವ ಷರತ್ತುಗಳಿಗೊಳಪಟ್ಟು ಕೆಳಕಂಡ ಸೂಚನೆಗಳನ್ನು ಅನುಸರಿಸಿ ತುರ್ತಾಗಿ ಕ್ರಮವಹಿಸಲು ಜಿಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಚಿಸಿದೆ.

1. ಜಿಲ್ಲೆಯಲ್ಲಿರುವ ಹೆಚ್ಚುವರಿ ಖಾಲಿ ಹುದ್ದೆಗಳನ್ನು ಗುರುತಿಸಿ ಪ್ರತಿ ಬ್ಲಾಕ್‌ಗೆ ಎರಡು ಪ್ರಾಥಮಿಕ ಶಾಲಾ ಸಹ ಶಿಕ್ಷಕರ ಹಾಗೂ ಎರಡು ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದ ಹುದ್ದೆಗಳನ್ನು ಕ್ಷೇತ್ರ ಸಂಪನ್ಮೂಲ ಕೇಂದ್ರಕ್ಕೆ ಸಮನ್ವಯ ಶಿಕ್ಷಣದ ಕಾರ್ಯವನ್ನು ನಿರ್ವಹಿಸುವುದಕ್ಕಾಗಿ ಸ್ಥಳಾಂತರಿಸುವುದು.

2. ಈ ರೀತಿ ಸ್ಥಳಾಂತರಿಸಲಾದ ಹುದ್ದೆಗಳನ್ನು ಬ್ಲಾಕ್ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರು (ಪ್ರಾಥಮಿಕ) ಹಾಗೂ ಬ್ಲಾಕ್ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರು(ಪ್ರೌಢ) ಎಂದು ಮರುನಾಮಕರಣ ಮಾಡುವುದು.

3. ಸದರಿ ಹೆಚ್ಚುವರಿ ಹುದ್ದೆಗಳನ್ನು ಸ್ಥಳಾಂತರಿಸಿ ಮರುನಾಮಕರಣ ಮಾಡಿದ ನಂತರ ಶಿಕ್ಷಕರ ದತ್ತಾಂಶ ವ್ಯವಸ್ಥೆಯಲ್ಲಿ(TDS) ಇಂದೀಕರಿಸಲು ಆಯಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ಇವರು ಪ್ರಸ್ತಾವನೆಯನ್ನು ಈ ಕಛೇರಿಗೆ ಸಲ್ಲಿಸುವುದು

4. ವಿಶೇಷ ಅಗತ್ಯತೆಯುಳ್ಳ ಮಕ್ಕಳಲ್ಲಿ 21 ನ್ಯೂನತೆಗಳನ್ನು ಗುರುತಿಸಿದ್ದು, ಇವುಗಳಲ್ಲಿ ಪ್ರಮುಖವಾಗಿ ನಾಲ್ಕು ನ್ಯೂನತೆಗಳಿಗೆ ಸಂಬಂಧಿಸಿದಂತೆ, ಸಮನ್ವಯ ಶಿಕ್ಷಣವನ್ನು ನೀಡಲು ಅರ್ಹ ವಿದ್ಯಾರ್ಹತೆಯನ್ನು ಹೊಂದಿರುವ ಶಿಕ್ಷಕರನ್ನು ನೇಮಿಸಿಕೊಳ್ಳಲು ಜಿಲ್ಲಾ ಹಂತದಲ್ಲಿ ಅರ್ಜಿಯನ್ನು ಆಹ್ವಾನಿಸುವುದು. ಒಂದೇ ವಿಷಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಅರ್ಜಿಗಳು ಸ್ವೀಕೃತವಾದಲ್ಲಿ ಸೇವಾ ಜೇಷ್ಠತೆಯನ್ನು ಪರಿಗಣಿಸಿ ಆಯ್ಕೆ ಮಾಡುವುದು.

ಪ್ರತಿ ಬ್ಲಾಕ್‌ವಾರು ಮಂಜೂರಾದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಕರ ವೃಂದದ ಬ್ಲಾಕ್ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರು, ಅವರ ವಿದ್ಯಾರ್ಹತೆ ಹಾಗು ಕ್ಷೇತ್ರಗಳು ಈ ಕೆಳಗಿನಂತಿವೆ:-

| ಹುದ್ದೆಯ ವಿವರ | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ಸಮನ್ವಯ ಶಿಕ್ಷಣದ ಕ್ಷೇತ್ರಗಳು |
|---|---|---|---|
| ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ-ಬ್ಲಾಕ್ ಬ್ಲಾಕ್ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರು (ಪ್ರಾಥಮಿಕ) | ಎರಡು | Special D.Ed with RCI registration/MCTT+ Add on Course | ಶ್ರವಣ ದೋಷ(Hearing Impaired), ದೃಷ್ಟಿ ದೋಷ (Visually Impaired), |
| ಪ್ರೌಢ ಶಾಲಾ ಸಹ ಶಿಕ್ಷಕರ ವೃಂದ-ಬ್ಲಾಕ್ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರು (ಪ್ರೌಢ) | ಎರಡು | Special B.Ed with RCI registration | ಬುದ್ಧಿಮಾಂದ್ಯ (Mentally Retarded) ಮತ್ತು ಬಹು ವಿಕಲಾಂಗತೆ (Multiple Disabilities) ವಿಷಯಗಳಲ್ಲಿ ಅಧ್ಯಯನ ಮಾಡಿರುವವರನ್ನು ಪರಿಗಣಿಸುವುದು. |

6. ಜಿಲ್ಲೆಯಲ್ಲಿ ಹೆಚ್ಚುವರಿ ಖಾಲಿ ಹುದ್ದೆಗಳನ್ನು ಮಾತ್ರ ಈ ಉದ್ದೇಶಕ್ಕಾಗಿ ಸ್ಥಳಾಂತರಿಸುವುದು.
7. ಸ್ಥಳಾಂತರಿಸುವಾಗ ಪ್ರಾಥಮಿಕ ಶಾಲೆ ಅಥವಾ ಪ್ರೌಢ ಶಾಲೆಗಳ ಕಾರ್ಯ ನಿರ್ವಹಣೆಗೆ ಧಕ್ಕೆಯಾಗದಂತೆ ವಿದ್ಯಾರ್ಥಿಗಳ ಮತ್ತು ಶಿಕ್ಷಕರ ಅನುಪಾತ ಕಾಯ್ದುಕೊಳ್ಳುವುದು.
8. ಪದವೀಧರ ಪ್ರಾಥಮಿಕ (6 ರಿಂದ 8ನೇ ತರಗತಿಗಳ) ಶಿಕ್ಷಕರ ಹುದ್ದೆಯನ್ನು ಸ್ಥಳಾಂತರಿಸಬಾರದು. ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ 1 ರಿಂದ 5 ನೇ ತರಗತಿಗಳ ಸಾಮಾನ್ಯ ಹುದ್ದೆಗಳನ್ನೇ ಗುರುತಿಸಿ ಸ್ಥಳಾಂತರಿಸತಕ್ಕದ್ದು.
9. ಹುದ್ದೆ ಸಹಿತ ಶಿಕ್ಷಕರನ್ನು ಸ್ಥಳಾಂತರಗೊಳಿಸಿ ನಿಯುಕ್ತಿಗೊಳಿಸಬಾರದು, ಹೆಚ್ಚುವರಿ ಖಾಲಿ ಹುದ್ದೆಗಳನ್ನು ಮಾತ್ರ ಸ್ಥಳಾಂತರಿಸಬೇಕು.
10. ಪ್ರೌಢ ಶಾಲಾ ಶಿಕ್ಷಕರಿಗೆ ಸಂಬಂಧಪಟ್ಟಂತೆ ಜಿಲ್ಲಾ ಹಂತದಲ್ಲಿ ಹುದ್ದೆಗಳು ಲಭ್ಯವಿಲ್ಲದಿದ್ದಲ್ಲಿ ವಿಭಾಗೀಯ ಹಂತದಲ್ಲಿ ಪರಿಗಣಿಸಬಹುದು.
11. ಈ ಹುದ್ದೆಗಳಿಗೆ ತತ್ಸಂಬಂದ ವಿಶೇಷ ಡಿ.ಇಡಿ/ವಿಶೇಷ ಬಿ.ಇಡಿ ಪದವಿಗಳನ್ನು ಹೊಂದಿರುವ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರನ್ನು ಉಲ್ಲೇಖದಲ್ಲಿನ ಸರ್ಕಾರಿ ಆದೇಶದಲ್ಲಿ ಸೂಚಿಸಿರುವ ಕ್ರಮಗಳನುಸಾರ ನಿಯಮಾನುಸಾರ ನಿಯುಕ್ತಿಗೊಳಿಸಲು ಹಾಗು ಈ ಹುದ್ದೆಗಳಿಗೆ ಸೂಕ್ತ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರು ಲಭ್ಯವಿಲ್ಲದ್ದಿದಲ್ಲಿ, ಸದರಿ ಖಾಲಿ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ನೇಮಿಸಿಕೊಳ್ಳುವ ಬಗ್ಗೆ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ-ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ವರದಿ/ಪ್ರಸ್ತಾವನೆಯನ್ನು ಸಲ್ಲಿಸಿ ಸೂಕ್ತ ಅನುಮತಿ/ಆದೇಶ ಪಡೆದು ನಂತರ ಮುಂದಿನ ಕ್ರಮವಹಿಸತಕ್ಕದ್ದು. ಸಮಗ್ರ-ಶಿಕ್ಷಣ ಕರ್ನಾಟಕ, ಈ ಕಛೇರಿಯ ಮಾರ್ಗಸೂಚಿ ಅನ್ವಯ ಸದರಿ ಹುದ್ದೆಗಳನ್ನು ಭರ್ತಿಗೊಳಿಸಲು ಮೀಸಲಿಡತಕ್ಕದ್ದು.

7/9/19

(ಡಾ: ಕೆ.ಜಿ. ಜಗದೀಶ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)ಇವರಿಗೆ ಅಗತ್ಯ ಕ್ರಮಕ್ಕಾಗಿ.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಸಲ್ಲಿಸಿದೆ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲ್ಬುರ್ಗಿ
4. ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಕಲ್ಬುರ್ಗಿ/ಬೆಳಗಾಂ.
5. ನಿರ್ದೇಶಕರು (ಪ್ರೌಢ/ಪ್ರಾಥಮಿಕ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಹಾಗೂ ಉಪನಿರ್ದೇಶಕರು/ಸಹನಿರ್ದೇಶಕರಿಂದ ದತ್ತಾಂಶದಲ್ಲಿ ಪದನಾಮ ಇಂದೀಕರಿಸಲು ಸ್ವೀಕೃತವಾಗುವ ಕೋರಿಕೆಗಳ ಕುರಿತು ಅಗತ್ಯ ಕ್ರಮ ಜರುಗಿಸಲು ಸೂಚಿಸಿದೆ.
7. ಕಛೇರಿ ಪ್ರತಿ.